ಫೆಬ್ರವರಿ-2021

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ

**ವಾರ್ತಾಪತ್ರ**

ಸ್ವಚ್ಛ ಸಂಕೀರ್ಣ · ಜಲೋತ್ಸವ · Har Ghar Jal Jal Jeevan Mission

## ನಮ್ಮ ನಡಿಗೆ – ತ್ಯಾಜ್ಯ ಮುಕ್ತ ಕಡೆಗೆ



ಗ್ರಾಮೀಣ ಕರ್ನಾಟಕವನ್ನು ತ್ಯಾಜ್ಯ ಮುಕ್ತವಾಗಿಸಲು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು, **ಸ್ವಚ್ಛ ಭಾರತ್ ಮಿಷನ್(ಗ್ರಾ)** ಯೋಜನೆಯಡಿ ಹಲವಾರು ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನ ಮಾಡುತ್ತಿದೆ. ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತವಾಗಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಹಂತದಲ್ಲಿ **ಸ್ವಚ್ಛ ಸಂಕೀರ್ಣ**(ಘನ ತ್ಯಾಜ್ಯ ವಿಲೇವಾರಿ ಘಟಕ)ಗಳನ್ನು ನಿರ್ಮಿಸುವ ಮೂಲಕ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಎಲ್ಲಾ ಮನೆ ಹಾಗೂ ಅಂಗಡಿ ಮುಂಗಟ್ಟುಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಸಂಗ್ರಹಿಸಿ ವಿಲೇವಾರಿ ಮಾಡಲಾಗುತ್ತಿದೆ. ಇದೀಗ ಒಂದು ಹೆಜ್ಜೆ ಮುಂದಿಟ್ಟಿರುವ ಇಲಾಖೆಯು ಮೂಲದಲ್ಲಿಯೇ ತ್ಯಾಜ್ಯ ವಿಂಗಡಣೆ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ **‘ನಮ್ಮ ನಡಿಗೆ– ತ್ಯಾಜ್ಯ ಮುಕ್ತದ ಕಡೆಗೆ’** ಎಂಬ ವಿಶೇಷ ಆಂದೋಲನವನ್ನು ಹಮ್ಮಿಕೊಂಡಿದೆ. 2 ಹಂತಗಳಲ್ಲಿ ಹಮ್ಮಿಕೊಂಡಿರುವ ಈ ಆಂದೋಲನದಲ್ಲಿ ಈಗಾಗಲೇ ರಾಜ್ಯದ ಎಲ್ಲಾ ಗ್ರಾಮಗಳಲ್ಲಿ ನಿಗದಿಪಡಿಸಿರುವಂತೆ ಡಂಗೂರ ಸಾರುವುದು, ಶ್ರಮದಾನ, **VWSC** ರಚನೆ, ಪ್ರತಿಜ್ಞಾ ವಿಧಿ ಬೋಧನೆ, ಜಾಥಾ ಕಾರ್ಯಕ್ರಮ, ನೈರ್ಮಲ್ಯ ನೀತಿ, ಕಾರ್ಯತಂತ್ರ ಹಾಗೂ ಬೈ–ಲಾ **(by-law)** ಗಳ ಕುರಿತಾಗಿ ಚುನಾಯಿತ ಪ್ರತಿನಿಧಿಗಳಿಗೆ ಮಾಹಿತಿ ನೀಡುವುದು ಸೇರಿದಂತೆ ಇತರೆ 3 ವಾರಗಳ ಕಾರ್ಯಕ್ರಮಗಳನ್ನು ಪೂರ್ಣಗೊಳಿಸಲಾಗಿದೆ. 15ನೇ ಫೆಬ್ರವರಿಯವರೆಗೆ ಈ ಆಂದೋಲನವನ್ನು ನಡೆಸುವಂತೆ ಸೂಚಿಸಲಾಗಿತ್ತಾದರೂ ಕೆಲ ಜಿಲ್ಲೆಗಳಲ್ಲಿ ಕಾರ್ಯಕ್ರಮವನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸದೇ ಇರುವ ಕಾರಣ, ಈ ವಿಶೇಷ ಆಂದೋಲನವನ್ನು ಮಾರ್ಚ್ ಅಂತ್ಯದವರೆಗೆ ಮುಂದುವರೆಸುವಂತೆ ಸೂಚಿಸಲಾಗಿದೆ.




## ತರಬೇತಿ ಕಾರ್ಯಕ್ರಮಗಳು

### Social Media Workshop-GOI

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು **ಸ್ವಚ್ಛ ಭಾರತ್ ಮಿಷನ್ (ಗ್ರಾ)** ಹಾಗೂ **ಜಲ ಜೀವನ್ ಮಿಷನ್** ಯೋಜನೆಗಳ ಅನುಷ್ಠಾನ ಮಾಡುತ್ತಿದ್ದು, ಯೋಜನೆಗಳಡಿಯಲ್ಲಿ ಹಮ್ಮಿಕೊಳ್ಳುವ ವಿವಿಧ ಕಾರ್ಯಕ್ರಮಗಳನ್ನು ಹೆಚ್ಚು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ವಿವಿಧ ಸಾಮಾಜಿಕ ಮಾಧ್ಯಮಗಳನ್ನು ನಿರ್ವಹಿಸುತ್ತಾ ಬಂದಿರುವುದು ಮಾದರಿಯಾಗಿದೆ. ಈ ನಿಟ್ಟಿನಲ್ಲಿ **ಜಲ ಶಕ್ತಿ ಮಂತ್ರಾಲಯವು** ದಿನಾಂಕ:11.02.2021 ರಂದು ಎಲ್ಲಾ ರಾಜ್ಯಗಳಿಗೆ **Video Conference** ಮೂಲಕ **Social Media Workshop** ಆಯೋಜಿಸಿತ್ತು. ಇದರಲ್ಲಿ ನಮ್ಮ ಇಲಾಖೆಯ ಸಾಮಾಜಿಕ ಮಾಧ್ಯಮಗಳು ಜನರನ್ನು ಪರಿಣಾಮಕಾರಿಯಾಗಿ ತಲುಪಲು ಕೈಗೊಂಡ ಕಾರ್ಯತಂತ್ರಗಳು ಮತ್ತು ಯೋಜನೆಗಳ ಬಗ್ಗೆ ನಿರ್ದೇಶಕರ(ಐ.ಎಸ್.ಎ) ನೇತೃತ್ವದಲ್ಲಿ ಯಶಸ್ವಿಯಾಗಿ ವಿವರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಎಲ್ಲಾ ರಾಜ್ಯಗಳ **ಸ್ವಚ್ಛ ಭಾರತ್ ಮಿಷನ್ (ಗ್ರಾ)** ಯೋಜನೆಯಡಿ ಕಾರ್ಯ ನಿರ್ವಹಿಸುತ್ತಿರುವ ಯೋಜನಾಧಿಕಾರಿಗಳು ಹಾಗೂ ಐ.ಇ.ಸಿ ಸಮಾಲೋಚಕರು ಪಾಲ್ಗೊಂಡಿದ್ದರು.







### ODF+ ಘಟಕಾಂಶಗಳ ಅನುಷ್ಠಾನ ಕುರಿತ ತರಬೇತಿ



**ಸ್ವಚ್ಛ ಭಾರತ್ ಮಿಷನ್(ಗ್ರಾ)** ಯೋಜನೆಯ ಹಂತ–2ರ ಮಾರ್ಗಸೂಚಿಯಂತೆ **ODF+** ಘಟಕಾಂಶಗಳನ್ನು ಯಶಸ್ವಿಯಾಗಿ ಅನುಷ್ಠಾನ ಮಾಡುವ ಮೂಲಕ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಬಯಲು ಬಹಿರ್ದೆಸೆ ಮುಕ್ತ ಸುಸ್ಥಿರತೆ ಕಾಯ್ದುಕೊಳ್ಳಬೇಕಿದೆ. ಜೊತೆಗೆ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯನ್ನು ಗ್ರಾಮೀಣ ಕರ್ನಾಟಕದಾದ್ಯಂತ ಸಮರ್ಪಕವಾಗಿ ಮಾಡಬೇಕಿದ್ದು, ಈ ನಿಟ್ಟಿನಲ್ಲಿ ರಾಜ್ಯದ ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮೂರು ಹಂತಗಳಲ್ಲಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ದಿನಾಂಕ: 24, 25 ಮತ್ತು 26ನೇ ಫೆಬ್ರವರಿಯಂದು ಮೂರು ದಿನಗಳ ಕಾಲ ನಡೆದ ತರಬೇತಿ ಕಾರ್ಯಕ್ರಮದಲ್ಲಿ ಎಲ್ಲಾ 30 ಜಿಲ್ಲೆಗಳ 196 ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಪಾಲ್ಗೊಂಡಿದ್ದರು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಆಯುಕ್ತರು, ಕೊಡಗು ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾ.ಕು.ನೀ ಮತ್ತು ನೈ. ಇಲಾಖೆಯ ಸ್ವಚ್ಛ ಭಾರತ್ ಮಿಷನ್(ಗ್ರಾ) ಉಪ ನಿರ್ದೇಶಕರು, ನಿರ್ದೇಶಕರು**(ISA)**, **HRD** ರಾಜ್ಯ ಸಮಾಲೋಚಕರು ಸೇರಿದಂತೆ ಎಲ್ಲಾ 196 ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತರಬೇತಿ ನೀಡಲಾಯಿತು.





